ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

5

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE 9/10/20

# ವರದಿ ನೆಗೆಟಿವ್ ಬಂದರಷ್ಟೇ ಸಿಎಂ ಭೇಟಿ

## ಮುಖ್ಯಮಂತ್ರಿಗಳ ಭೇಟಿಗೆ ರ್‍ಯಾಪಿಡ್ ಆ್ಯಂಟಿಜೆನ್ ಪರೀಕ್ಷೆ ಕಡ್ಡಾಯ!

ಉದಯ 9/10/20

ಬೆಂಗಳೂರು: ಕೋವಿಡ್-19 ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರನ್ನು ಗೃಹ ಕಚೇರಿ 'ಕೃಷ್ಣಾ'ದಲ್ಲಿ ಭೇಟಿಯಾಗುವ ಸಂದರ್ಶಕರು, ಸಾರ್ವಜನಿಕರು, ನಿಯೋಗ, ಸಂಘ ಸಂಸ್ಥೆಗಳ ಪದಾಧಿಕಾರಿಗಳಿಗೆ ರ್‍ಯಾಪಿಡ್ ಆ್ಯಂಟಿಜೆನ್ ಪರೀಕ್ಷೆಯನ್ನು ಕಡ್ಡಾಯಗೊಳಿಸಲಾಗಿದ್ದು ನೆಗೆಟಿವ್ ವರದಿ ಬಂದರಷ್ಟೇ ಭೇಟಿಗೆ ಅವಕಾಶ ನೀಡಲಾಗುತ್ತಿದೆ.



ಈಗಾಗಲೇ ಒಮ್ಮೆ ಕೋವಿಡ್-19 ಕಾಣಿಸಿಕೊಂಡು ಗುಣಮುಖರಾಗಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳ ಆರೋಗ್ಯದ ದೃಷ್ಟಿಯಿಂದ ಕಳೆದ ಮಂಗಳವಾರದಿಂದ ಕೋವಿಡ್- 19 ಪತ್ತೆ ಪರೀಕ್ಷೆ ವ್ಯವಸ್ಥೆಯನ್ನು 'ಕೃಷ್ಣಾ'ದಲ್ಲಿ ಕಲ್ಪಿಸಲಾಗಿದೆ. ಈವರೆಗೆ ಸುಮಾರು 200ಕ್ಕೂ ಹೆಚ್ಚು ಮಂದಿ ತಪಾಸಣೆಗೆ ಒಳಗಾಗಿದ್ದಾರೆ.

ಮುನ್ನೆಚ್ಚರಿಕೆ ಕ್ರಮವಾಗಿ 'ಕೃಷ್ಣಾ'ದಲ್ಲಿ ಮುಖ್ಯಮಂತ್ರಿಗಳ ಭೇಟಿಗೆ ಬರುವ ಸಾರ್ವಜನಿಕರು, ಸಂಘ ಸಂಸ್ಥೆ ನಿಯೋಗದ ಪದಾಧಿಕಾರಿಗಳಿಗೆ ರ್‍ಯಾಪಿಡ್ ಆ್ಯಂಟಿಜೆನ್ ಪರೀಕ್ಷೆ ನಡೆಸಲಾಗುತ್ತಿದೆ. ಭೇಟಿಗೆ ನಿಗದಿಯಾದ ಸಮಯಕ್ಕೂ ಮೊದಲೇ ಸಂದರ್ಶಕರು 'ಕೃಷ್ಣಾ'ಗೆ ಆಗಮಿಸಬೇಕು. ನಿಗದಿತ ಸ್ಥಳದಲ್ಲಿ (ಜನತಾ ದರ್ಶನ ನಡೆಯುತ್ತಿದ್ದ ಸ್ಥಳ) ಸಂದರ್ಶಕರು ರ್‍ಯಾಪಿಡ್ ಆ್ಯಂಟಿಜೆನ್ ಪರೀಕ್ಷೆಗೆ ಒಳಗಾಗಬೇಕು. ನೆಗೆಟಿವ್ ವರದಿ ಬಂದಿರುವ ಬಗ್ಗೆ ಮೊಹರು ಇರುವ ಚೀಟಿ ಪ್ರದರ್ಶಿಸಿದವರಷ್ಟೇ ಗೃಹ ಕಚೇರಿ ಒಳಗೆ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗುತ್ತದೆ ಎಂದು ಮುಖ್ಯಮಂತ್ರಿಗಳ ಸಚಿವಾಲಯ ಮೂಲಗಳು ತಿಳಿಸಿವೆ.

ಒಂದೊಮ್ಮೆ ವರದಿ ಪಾಸಿಟಿವ್ ಬಂದರೆ ಪ್ರವೇಶಕ್ಕೆ ಅವಕಾಶ ನೀಡುವುದಿಲ್ಲ. ಗುರುವಾರ 80 ಮಂದಿಗೆ ಪರೀಕ್ಷೆ ನಡೆಸಲಾಗಿದ್ದು, ಈವರೆಗೆ 200ಕ್ಕೂ ಹೆಚ್ಚು ಮಂದಿ ತಪಾಸಣೆಗೆ ಒಳಗಾಗಿದ್ದಾರೆ. ಸ್ವಾಮೀಜಿಯೊಬ್ಬರು ಇತ್ತೀಚೆಗೆ ಪರೀಕ್ಷೆ ಮಾಡಿಸಿಕೊಂಡ ಬಳಿಕವಷ್ಟೇ ಮುಖ್ಯಮಂತ್ರಿಗಳನ್ನು ಭೇಟಿಯಾಗಿದ್ದರು. ಸಚಿವರು, ಶಾಸಕರು, ಅಧಿಕಾರಿಗಳಿಗೆ ಪರೀಕ್ಷೆ ನಡೆಸುವುದಿಲ್ಲ. ಸಾರ್ವಜನಿಕರು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ನಿಯೋಗದಲ್ಲಿ ಬರುವವರಿಗಷ್ಟೇ ಪರೀಕ್ಷೆ ಕಡ್ಡಾಯಗೊಳಿಸಲಾಗಿದೆ. ಪರೀಕ್ಷೆಗೆ ಒಳಗಾಗಲು ಹಿಂದೇಟು ಹಾಕುವವರಿಗೆ ಪ್ರವೇಶ ನಿರಾಕರಿಸಲಾಗುತ್ತಿದೆ. ಈ ವ್ಯವಸ್ಥೆಯಿಂದ ತುರ್ತು ಅಗತ್ಯವಿದ್ದವರಷ್ಟೇ ಸಿಎಂ ಬಿಎಸ್‌ವೈ ಭೇಟಿಗೆ ಆಗಮಿಸುತ್ತಿದ್ದಾರೆ.

## 5,121 ಮಂದಿಗೆ ಸೋಂಕು

ಬೆಂಗಳೂರು: ನಗರದಲ್ಲಿ ಕೊರೊನಾ ಸೋಂಕಿತರ ಸಂಖ್ಯೆಯಲ್ಲಿ ದಿನೇ ದಿನೆ ಏರುತ್ತಿದೆ. ಜತೆಗೆ ಗುಣಮುಖರ ಬಿಡುಗಡೆಯಲ್ಲಿ ಇಳಿಕೆಯಾಗಿದೆ. ಗುರುವಾರ 5,121 ಕೊರೊನಾ ಸೋಂಕಿತ ಪ್ರಕರಣಗಳು ಕಂಡುಬಂದಿದ್ದು, ಈ ಮೂಲಕ ಕೋವಿಡ್-19 ಸೋಂಕಿತರ ಸಂಖ್ಯೆ 2,67,362ಕ್ಕೆ ಏರಿಕೆಯಾಗಿದೆ. 44 ಮಂದಿ ಸಾವಿಗೀಡಾಗಿದ್ದು ಕೊರೊನಾಕ್ಕೆ ಬಲಿಯಾದವರ ಸಂಖ್ಯೆ 3,233ಕ್ಕೆ ಏರಿಕೆ ಆಗಿದೆ. ಹಾಗೆಯೇ 3,505 ಮಂದಿ ಕೊರೊನಾ ಸೋಂಕಿನಿಂದ ಚೇತರಿಸಿಕೊಂಡು ಬಿಡುಗಡೆ ಹೊಂದಿದ್ದಾರೆ. ಒಟ್ಟು ಬಿಡುಗಡೆ ಸಂಖ್ಯೆ 2,03,931ಕ್ಕೆ ಏರಿಕೆ ಆಗಿದೆ. ಇದರ ಜತೆಗೆ ಪ್ರಸ್ತುತ 69,197 ಸಕ್ರಿಯ ಪ್ರಕರಣಗಳಿದ್ದು, ಹಾಗೆಯೇ 313 ಮಂದಿ ತೀವ್ರ ನಿಗಾಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

- ಒಟ್ಟು ಸೋಂಕಿತರು **2,67,362**
- ಒಟ್ಟು ಬಿಡುಗಡೆ **2,03,931**
- ಒಟ್ಟಾರೆ ಸಾವಿನ ಸಂಖ್ಯೆ **3,233**
- ಸಕ್ರಿಯ ಪ್ರಕರಣಗಳು **60,197**
- ಐಸಿಯುನಲ್ಲಿ ಚಿಕಿತ್ಸೆ **313**